Akashvani : Bangalore
Regional Bulletin In Kannada
28.05.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ, ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ರಾಜೀನಾಮೆ ಪತ್ರ ಸಲ್ಲಿಕೆ
- ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ; ರಾಜ್ಯ ರಾಜಕಾರಣದಲ್ಲೇ ಮುಂದುವರಿಯುವುದಾಗಿ ಮುಖ್ಯಮಂತ್ರಿ ಸ್ಪಷ್ಟನೆ
- ಯಾರು ನೂತನ ಮುಖ್ಯಮಂತ್ರಿಯಾದರೂ ರಾಜ್ಯದ ಜನತೆಗೆ ಪ್ರಯೋಜನವಿಲ್ಲ - ಬಿಜೆಪಿ ಅಭಿಮತ
- ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನಾಳೆ ರಾಜ್ಯ ಪ್ರವಾಸ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
- ಮಂಗಳೂರಿನ ತಣ್ಣೀರುಬಾವಿ ಇಕೋ ಬೀಚ್‌ನಲ್ಲಿ ನಾಳೆ ಇಂಡಿಯನ್ ಓಪನ್ ಆಫ್ ಸರ್ಫಿಂಗ್ ಪಂದ್ಯಾವಳಿಗೆ ಚಾಲನೆ

---

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ಸಲ್ಲಿಸಿದ್ದಾರೆ. ಲೋಕಭವನಕ್ಕೆ ಸಂಪುಟ ಸಹೋದ್ಯೋಗಿಗಳೊಂದಿಗೆ ತೆರಳಿದ ಅವರು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅನುಪಸ್ಥಿತಿಯಲ್ಲಿ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಭುಶಂಕರ್ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ.

ರಾಜೀನಾಮೆ ಪತ್ರವನ್ನು ಸ್ವೀಕರಿಸಿದ ಪ್ರಭುಶಂಕರ್, ಶಿಷ್ಟಾಚಾರದ ಬಗ್ಗೆ ಸಿದ್ದರಾಮಯ್ಯ ಅವರಿಗೆ ಮನವರಿಕೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ರಾಜ್ಯಪಾಲರನ್ನು ಮತ್ತೊಮ್ಮೆ ಭೇಟಿಯಾಗಲಿದ್ದಾರೆ.

---

ವರಿಷ್ಠರ ಸೂಚನೆಯಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ತಮ್ಮ ರಾಜೀನಾಮೆಯನ್ನು ಅಂಗೀಕರಿಸುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಎರಡು ಬಾರಿ ಮುಖ್ಯಮಂತ್ರಿ, ಎರಡು ಬಾರಿ ವಿರೋಧ ಪಕ್ಷದ ನಾಯಕನಾಗಲು ಅವಕಾಶ ನೀಡಿದ ಕಾಂಗ್ರೆಸ್ ಹಿರಿಯ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

******ಧ್ವನಿ*****ಸಿದ್ದರಾಮಯ್ಯ

ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ, ಹೀಗಾಗಿ ರಾಜ್ಯ ರಾಜಕಾರಣದಲ್ಲೇ ಮುಂದುವರಿಯುವುದಾಗಿ ಸಿದ್ದಾರಾಮಯ್ಯ ತಿಳಿಸಿದ್ದಾರೆ. ರಾಜ್ಯದ ಜನತೆ ಐದು ವರ್ಷಗಳ ಕಾಲ ಶಾಸಕನಾಗಿ ಆಯ್ಕೆ ಮಾಡಿದ್ದಾರೆ. ಇನ್ನೂ ಎರಡು ವರ್ಷ ಅವಧಿ ಇದ್ದು, ಅಲ್ಲಿಯವರೆಗೆ ಕರ್ನಾಟಕ ಹಾಗೂ ಕ್ಷೇತ್ರದ ಜನತೆ ಪರವಾಗಿ ಸೇವೆ ಸಲ್ಲಿಸುವುದಾಗಿ ಹೇಳಿದ್ದಾರೆ.

ಇದೇ ವೇಳೆ, ಮುಂದಿನ ಮುಖ್ಯಮಂತ್ರಿ ಯಾರು ಎಂಬ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, ಅವರು ಈ ಬಗ್ಗೆ ಶಾಸಕಾಂಗ ಪಕ್ಷದ ಸಭೆ ಮತ್ತು ವರಿಷ್ಠರು ತೀರ್ಮಾನ ಕೈಗೊಳ್ಳಲಿದ್ದಾರೆ ಎಂದರು. ತಮ್ಮ ರಾಜಕೀಯ ಜೀವನ ಹಾಗೂ ನಡೆದುಬಂದ ಹಾದಿಯನ್ನು ಸ್ಮರಿಸಿದರು.

ನಟ ರಾಜ್‌ಕುಮಾರ್ ಅಭಿಮಾನಿಗಳನ್ನು ದೇವರು ಎಂದು ಕರೆದಿದ್ದು, ಅದೇ ರೀತಿ ಮತದಾರರೇ ತಮಗೆ ಅಭಿಮಾನಿ ದೇವರಾಗಿದ್ದಾರೆ. ಸಂವಿಧಾನವೇ ನಮ್ಮ ಧರ್ಮ ಎಂದು ತಿಳಿದಿದ್ದೇನೆ ಎಂದು ಹೇಳಿದರು.

೨೦೦೬ರಲ್ಲಿ   ಕಾಂಗ್ರೆಸ್ ಪಕ್ಷಕ್ಕೆ ಸೇರಿದ ಬಳಿಕ ಎಲ್ಲಾ ಕಾರ್ಯಕರ್ತರು, ಶಾಸಕರು, ಸಂಸದರು ಪ್ರೀತಿ ತೋರಿದ್ದಾರೆ. ಈ ಹಿನ್ನೆಲೆಯಲ್ಲಿ ಅವರೆಲ್ಲರಿಗೂ ಧನ್ಯವಾದ ಸಲ್ಲಿಸುವುದಾಗಿ ಹೇಳಿದರು.

ಗ್ಯಾರಂಟಿ ಯೋಜನೆ ಜಾರಿಯಾದ ಬಳಿಕ ಕರ್ನಾಟಕದ ತಲಾ ಆದಾಯ ಮೊದಲ ಸ್ಥಾನದಲ್ಲಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿ ಬಳಿಕ ಎಲ್ಲಾ ನಾಯಕರು ಒಗ್ಗಟ್ಟು ಪ್ರದರ್ಶನ ಮಾಡಿದರು.  ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ದೀರ್ಘಾವಧಿ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದು, ೧೭ ಬಾರಿ ಆಯವ್ಯಯ ಮಂಡಿಸಿದ ಕೀರ್ತಿಯೂ ಅವರಿಗೆ ಸಲ್ಲುತ್ತದೆ.

---

ಮುಖ್ಯಮಂತ್ರಿ ಸಿದ್ದರಾಮಯ್ಯ ಏರ್ಪಡಿಸಿದ್ದ ಉಪಹಾರ ಕೂಟದಲ್ಲಿ ರಾಜೀನಾಮೆ ಘೋಷಿಸುವ ನಿರ್ಧಾರ ಪ್ರಕಟಿಸುತ್ತಿದ್ದಂತೆಯೇ ಇಡೀ ಸಚಿವ ಸಂಪುಟ ಭಾವುಕವಾಯಿತು ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವರು ಭಾವುಕರಾಗಿರುವುದನ್ನು ಕಂಡು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾವುಕರಾಗಿದ್ದರು. ಡಿ.ಕೆ. ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಆಗಲಿದ್ದಾರೆ ಎಂದು ವರಿಷ್ಠರು ತಮಗೆ ತಿಳಿಸಿದ್ದಾರೆ ಎಂದು ಮುಖ್ಯಮಂತ್ರಿ ಉಪಹಾರ ಕೂಟದಲ್ಲಿ  ಹೇಳಿದರು.

ತಮ್ಮ ರಾಜಕೀಯ ಜೀವನ ಕೊನೆಗೊಂಡಿದೆ ಎಂದು ಭಾವಿಸಿದ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರು ತಮ್ಮನ್ನು ಪರಿಷತ್ ಸದಸ್ಯನನ್ನಾಗಿ ಮಾಡಿ, ಸಂಪುಟಕ್ಕೆ ಸೇರ್ಪಡೆಗೊಳಿಸಿದರು ಎಂದು ಸ್ಮರಿಸಿದ್ದಾರೆ.

---

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿರುವುದು ಕಾಂಗ್ರೆಸ್ ಪಕ್ಷದ ಮೇಲೆ ಹಾಗೂ ಕರ್ನಾಟಕದ ಚುನಾವಣಾ ರಾಜಕಾರಣದ ಮೇಲೆ ಪರಿಣಾಮ ಬೀರಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ. ಕಾಂಗ್ರೆಸ್ ನಿಂದ ಹಿಂದುಳಿದವರಿಗೆ ನಂಬಿಕೆ ದ್ರೋಹವಾಗಿದೆ ಎಂದು ತಿಳಿಸಿದ್ದಾರೆ.

ಹೊಸದಾಗಿ ಯಾರು ಮುಖ್ಯಮಂತ್ರಿಯಾಗಿ ಬಂದರೂ, ಅದು ಕನ್ನಡಿಗರಿಗೆ ಅಥವಾ ಕರ್ನಾಟಕಕ್ಕೆ ಪ್ರಯೋಜವಿಲ್ಲ ಎಂದು ಬಿಜೆಪಿ ರಾಜ್ಯಘಟಕ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಪೋಸ್ಟ್ ಮಾಡಿದೆ.

ಬಡವರು, ಕಾರ್ಮಿಕರು, ರೈತರು, ಯುವಕರು, ಮಹಿಳೆಯರು, ದೀನ ದಲಿತರು ಮತ್ತು ಹಿಂದುಳಿದವರನ್ನು ಶೋಷಿಸುವ ಮೂಲಕ ಸರ್ಕಾರವನ್ನು ನಡೆಸುವ ಈ ಜನರ ಪ್ರವೃತ್ತಿ ನಿರಂತರವಾಗಿ ಮುಂದುವರಿಯಲಿದೆ ಎಂದು ತಿಳಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾದ ಪರಿಸ್ಥಿತಿ ಎದುರಾದ ಕ್ಷಣದಲ್ಲಿ, ಅಧಿಕಾರದ ಕೊನೆಯ ದಿನಗಳಲ್ಲಿ ತರಾತುರಿಯಲ್ಲಿ ಜಾತಿ ಜನಗಣತಿ ವರದಿ ಸ್ವೀಕರಿಸುವುದು, ಅದರ ಮಾಹಿತಿಯನ್ನು ಮಾಧ್ಯಮಗಳಿಗೆ ಸೋರಿಕೆ ಮಾಡುವುದು ಎಷ್ಟು ಸರಿ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ ಪ್ರಶ್ನಿಸಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ವಿಫಲವಾಗಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪರವಾದ ವಾತಾವರಣ ಇಲ್ಲ ಎಂದು ತಿಳಿಸಿದ್ದಾರೆ.

---

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ನಾಳೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ.

ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಫೌಂಡೇಷನ್‌ನ ಕಾರ್ಯಕ್ರಮದಲ್ಲಿ ಭಾಗಿಯಾಗಲಿರುವ ಅವರು, ಬಳಿಕ ದಾವಣಗೆರೆಯಲ್ಲಿರುವ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ಅಮೃತ ಮಹೋತ್ಸವದ ಸಂಭ್ರಮಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಭಾಗಿಯಾಗಲಿದ್ದಾರೆ.

ಕಾಲೇಜಿನಲ್ಲಿ ಓದಿದ ಒಂದು ಸಾವಿರದ ೫೦೦ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ.

ಭಾನುವಾರ ಉಪರಾಷ್ಟ್ರಪತಿಗಳು, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯಲ್ಲಿ ಸಿರಿ ಕೈಗಾರಿಕಾವನ ಉದ್ಘಾಟಿಸಲಿದ್ದಾರೆ. ಅಂದು ಶ್ರೀಕ್ಷೇತ್ರ ಧರ್ಮಸ್ಥಳದ ಮಂಜುನಾಥ ಸ್ವಾಮಿ ದೇವಾಲಯಕ್ಕೂ ಭೇಟಿ ನೀಡಲಿದ್ದಾರೆ.

---

ಬನ್ನೇರುಘಟ್ಟ ಮೃಗಾಲಯದಲ್ಲಿ ಕಳೆದ ರಾತ್ರಿ ಜನಿಸಿರುವ ನವಜಾತ ನೀರಾನೆ ಮರಿ ಹೆಣ್ಣಾಗಿದ್ದಲ್ಲಿ ತ್ಯಾವರೆಕೊಪ್ಪ ಮೃಗಾಲಯದಲ್ಲಿ ವೈದ್ಯರಾಗಿದ್ದ ದಿವಂಗತ ಡಾ. ಸಮೀಕ್ಷಾ ರೆಡ್ಡಿ ಗೌರವಾರ್ಥ 'ಸಮೀಕ್ಷಾ' ಎಂದು ಹೆಸರಿಡಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.

ಕಳೆದ ಬಾರಿ ಇದೇ ನೀರಾನೆ ಜನ್ಮ ನೀಡಿದ್ದ ಮರಿ ಸೋಂಕಿನಿಂದ ಮೃತಪಟ್ಟಿತ್ತು. ಈ ನಿಟ್ಟಿನಲ್ಲಿ ಮರಿಯ ಆರೋಗ್ಯದ ಬಗ್ಗೆ ಸತತ ನಿಗಾ ಇಟ್ಟು, ಯಾವುದೇ ಸೋಂಕು ತಗುಲದಂತೆ ಕಟ್ಟುನಿಟ್ಟಾಗಿ ಕಾರ್ಯಾಚರಣೆ ಮಾನದಂಡಗಳನ್ನು ಅನುಸರಿಸಲು ಸಚಿವರು ನಿರ್ದೇಶನ ನೀಡಿದ್ದಾರೆ.

---

ಉತ್ತರಕನ್ನಡ ಜಿಲ್ಲೆಯ ಭಟ್ಕಳಕ್ಕೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನಾಳೆ ಭೇಟಿ ನೀಡಲಿದ್ದಾರೆ.

ಭಾನುವಾರ ಭಟ್ಕಳದ ಶಿರಾಲಿ ಬಳಿ ಚಿಪ್ಪಿಕಲ್ಲು ತೆಗೆಯುವಾಗ ಉಂಟಾದ ದುರಂತದಲ್ಲಿ ಮೃತರಾದ ಸಂತ್ರಸ್ತ ಕುಟುಂಬದವರನ್ನು ಭೇಟಿಯಾಗಿ ಉಭಯ ನಾಯಕರು ಸಾಂತ್ವನ ಹೇಳಲಿದ್ದಾರೆ. ನಂತರ ಮುರಿನಕಟ್ಟೆ ಧ್ವಂಸವನ್ನು ವಿರೋಧಿಸಿ ಭಾರತೀಯ ಜನತಾ ಪಕ್ಷದಿಂದ ನಡೆಯುವ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ನಡುವೆ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಉತ್ತರಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನಾದ್ಯಂತ ತಾತ್ಕಾಲಿಕವಾಗಿ ಮದ್ಯ ನಿಷೇಧ ಜಾರಿಗೊಳಿಸಿ ಜಿಲ್ಲಾಧಿಕಾರಿ ಕೆ. ಲಕ್ಷ್ಮೀ ಪ್ರಿಯಾ ಆದೇಶ ಹೊರಡಿಸಿದ್ದಾರೆ.

__________ ಮುಕ್ತಾಯ __________